ಗುರುವಾರ 29.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 129
Digital Varthe Kannada Daily
Volume 01 - Issue 129
Thursday , 29.01.2026
Price: 5/- Rs
2 Pages Bangalore

PRGI/RNI: KNKAN/25/A1348

ಡಿಜಿಟಲ್ ವಾರ್ತೆ
ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ

DIGITAL VARTHE
digitalvarthe@gmail.com
www.digitalvarthe.com

# ವಿಮಾನ ದುರಂತದಲ್ಲಿ ಅಜಿತ್ ಪವಾರ್ ನಿಧನ



**ಬೆಂಗಳೂರು:** ಮಹಾರಾಷ್ಟ್ರದ ಉಪಮುಖ್ಯ ಮಂತ್ರಿ ಹಾಗೂ ರಾಷ್ಟ್ರ ರಾಜಕಾರಣದಲ್ಲಿ ಪ್ರಭಾವಿ ನಾಯಕನಾಗಿ ಗುರುತಿಸಿಕೊಂಡಿದ್ದ Ajit Pawar ಅವರು ಭೀಕರ ವಿಮಾನ ದುರಂತದಲ್ಲಿ ಅಕಾಲಿಕವಾಗಿ ನಿಧನರಾಗಿದ್ದಾರೆ. ಈ ಅಘಾತಕಾರಿ ಘಟನೆ ಮಹಾರಾಷ್ಟ್ರದಲ್ಲಿ ಮಾತ್ರವಲ್ಲ, ದೇಶದಾದ್ಯಂತ ರಾಜಕೀಯ ವಲಯ, ಸಾರ್ವಜನಿಕ ಜೀವನ ಹಾಗೂ ನಾಗರಿಕರಲ್ಲಿ ತೀವ್ರ ಶೋಕ ಮತ್ತು ಆಘಾತವನ್ನುಂಟುಮಾಡಿದೆ.

ರಾಷ್ಟ್ರೀಯ ಮಾಧ್ಯಮಗಳು ಹಾಗೂ ನಾಗರಿಕ ವಿಮಾನಯಾನ ನಿರ್ದೇಶನಾಲಯ DGCA ನೀಡಿರುವ ಮಾಹಿತಿಯಂತೆ, ಮುಂಬೈನಿಂದ ಬಾರಾಮತಿಗೆ ಪ್ರಯಾಣಿಸುತ್ತಿದ್ದ ಲಿಯರ್ಜೆಟ್-45 (Learjet 45) ಮಾದರಿಯ ಸಣ್ಣ ಖಾಸಗಿ ವಿಮಾನವು ಬಾರಾಮತಿ ವಿಮಾನ ನಿಲ್ದಾಣದಲ್ಲಿ ಲ್ಯಾಂಡ್ ಆಗುವ ಸಂದರ್ಭದಲ್ಲಿ ತಾಂತ್ರಿಕ ದೋಷಕ್ಕೆ ಒಳಗಾಗಿ ನಿಯಂತ್ರಣ ತಪ್ಪಿ ಪತನಗೊಂಡಿದೆ. ಲ್ಯಾಂಡಿಂಗ್ ಸಮಯದಲ್ಲೇ ವಿಮಾನವು ರನ್‌ವೇ ಸಮೀಪ ನೆಲಕ್ಕಪ್ಪಳಿಸಿ ಭೀಕರವಾಗಿ ಬೆಂಕಿ ಹೊತ್ತಿಕೊಂಡಿದ್ದು, ಅದರ ಪರಿಣಾಮವಾಗಿ ವಿಮಾನದಲ್ಲಿದ್ದ ಅಜಿತ್ ಪವಾರ್ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎನ್ನಲಾಗಿದೆ.

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ದಳ, ಪೊಲೀಸ್ ಸಿಬ್ಬಂದಿ ಹಾಗೂ ರಕ್ಷಣಾ ತಂಡಗಳು ತಕ್ಷಣವೇ ಸ್ಥಳಕ್ಕೆ ಧಾವಿಸಿ ರಕ್ಷಣಾ ಮತ್ತು ಶೋಧ ಕಾರ್ಯಾಚರಣೆ ನಡೆಸಿದವು. ಆದರೆ ಅಪಘಾತದ ತೀವ್ರತೆ ಹಾಗೂ ಬೆಂಕಿಯ ಪ್ರಮಾಣ ಹೆಚ್ಚಾಗಿದ್ದರಿಂದ ಜೀವ ಉಳಿಸಲು ಸಾಧ್ಯವಾಗಲಿಲ್ಲ. ಈ ದುರ್ಘಟನೆಯ ನಿಖರ ಕಾರಣಗಳ ಪತ್ತೆಗೆ ತನಿಖೆ ಆರಂಭಿಸಲಾಗಿದ್ದು, ಡಿಜಿಸಿಎ ವಿಶೇಷ ಸಮಿತಿಯನ್ನು ರಚಿಸಿ ಸಂಪೂರ್ಣ ವರದಿ ಸಲ್ಲಿಸಲು ಸೂಚಿಸಿದೆ. ತಾಂತ್ರಿಕ ದೋಷ, ಹವಾಮಾನ ಸ್ಥಿತಿ ಹಾಗೂ ಲ್ಯಾಂಡಿಂಗ್ ಪ್ರಕ್ರಿಯೆಯ ಎಲ್ಲ ಅಂಶಗಳನ್ನು ಸಮಗ್ರವಾಗಿ ಪರಿಶೀಲಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಅಜಿತ್ ಪವಾರ್ ಅವರ ನಿಧನದ ಸುದ್ದಿ ಹೊರಬಿದ್ದ ಬೆನ್ನಲ್ಲೇ ದೇಶದಾದ್ಯಂತ ಶೋಕಾಚರಣೆ ವ್ಯಕ್ತವಾಗಿದೆ. ಹಲವು ರಾಜ್ಯಗಳ ಮುಖ್ಯಮಂತ್ರಿ, ಕೇಂದ್ರ ಸಚಿವರು, ರಾಜಕೀಯ ಪಕ್ಷಗಳ ನಾಯಕರು ಹಾಗೂ ಸಾರ್ವಜನಿಕ ಗಣ್ಯರು ತಮ್ಮ ಆಘಾತ ಮತ್ತು ದುಃಖವನ್ನು ವ್ಯಕ್ತಪಡಿಸಿದ್ದಾರೆ. ಕರ್ನಾಟಕ ಮುಖ್ಯಮಂತ್ರಿ Siddaramaiah, ಉಪಮುಖ್ಯಮಂತ್ರಿ ಡಿಕೆ ಶಿವಕುಮರ್ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರಸೇರಿದಂತೆ ಅನೇಕ ನಾಯಕರು ಸಾಮಾಜಿಕ ಜಾಲತಾಣಗಳ ಮೂಲಕ ಹಾಗೂ ಅಧಿಕೃತ ಹೇಳಿಕೆಗಳ ಮೂಲಕ ಸಂತಾಪ ಸೂಚಿಸಿದ್ದಾರೆ.

**ಸಿಎಂ ಸಿದ್ದರಾಮಯ್ಯ ಅವರ ಸಂತಾಪ:**"ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರು ವಿಮಾನ ಅಪಘಾತದಲ್ಲಿ ನಿಧನರಾದ ಸುದ್ದಿ ತಿಳಿದು ತೀವ್ರ ದುಃಖವಾಗಿದೆ. ಅವರ ನಿಧನವು ಸಾರ್ವಜನಿಕ ಜೀವನಕ್ಕೆ ತುಂಬಲಾರದ ನಷ್ಟ. ಅವರ ಕುಟುಂಬ ಸದಸ್ಯರು, ಸಹೋದ್ಯೋಗಿಗಳು ಹಾಗೂ ಬೆಂಬಲಿಗರಿಗೆ ನನ್ನ ಹೃತ್ಪೂರ್ವಕ ಸಂತಾಪಗಳು. ಅವರ ಆತ್ಮಕ್ಕೆ ಶಾಂತಿ ಸಿಗಲಿ," ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಟ್ವೀಟ್ ಮೂಲಕ ತಮ್ಮ ದುಃಖವನ್ನು ವ್ಯಕ್ತಪಡಿಸಿದ್ದಾರೆ.

ಅನುಭವಸಂಪನ್ನ ರಾಜಕಾರಣಿ ಹಾಗೂ ಆಡಳಿತದಲ್ಲಿ ಮಹತ್ವದ ಪಾತ್ರ ವಹಿಸಿದ್ದ ಅಜಿತ್ ಪವಾರ್ ಅವರ ಅಕಾಲಿಕ ನಿಧನವು ಮಹಾರಾಷ್ಟ್ರದ ರಾಜಕೀಯಕ್ಕೆ ಮಾತ್ರವಲ್ಲದೆ ರಾಷ್ಟ್ರ ರಾಜಕಾರಣಕ್ಕೂ ದೊಡ್ಡ ಹೊಡೆತವೆಂದು ಹಲವು ನಾಯಕರು ಅಭಿಪ್ರಾಯಪಟ್ಟಿದ್ದಾರೆ.

# ಡೆತ್ ನೋಟ್ ಬರೆದಿಟ್ಟು ಶಿಕ್ಷಕಿ ಸಾವು



**ನವದೆಹಲಿ:**ಬಿಹಾರದ ಹಾಜಿಪುರದಲ್ಲಿ ಬಿಪಿಎಸ್‌ಸಿ ಶಿಕ್ಷಕಿಯೊಬ್ಬರ ಮೃತದೇಹ ಬಾಡಿಗೆ ಮನೆಯಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿರುವ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ಈ ಘಟನೆ ಆ ಪ್ರದೇಶದಲ್ಲಿ ವ್ಯಾಪಕ ಭೀತಿ ಮೂಡಿಸಿದೆ. ಆ ಶಿಕ್ಷಕಿಯ ರೂಂನಲ್ಲಿ ಸೂಸೈಡ್ ನೋಟ್ ಪತ್ತೆಯಾಗಿದೆ. ಮೃತ ಮಹಿಳೆಯನ್ನು ಖಾಜೆಚಂದ್ ಛಪ್ರಾ ಮಿಡಲ್ ಸ್ಕೂಲ್‌ನ ಶಿಕ್ಷಕಿ ಪ್ರಿಯಾ ಭಾರತಿ ಎಂದು ಗುರುತಿಸಲಾಗಿದೆ. ಆಟೋ ಚಾಲಕ ಆ ಮನೆಯ ಕಿಟಕಿಯಿಂದ ಒಳಗೆ ನೋಡಿದಾಗ ಆ ಶಿಕ್ಷಕಿ ತನ್ನ ರೂಂನಲ್ಲಿ ನೇತಾಡುತ್ತಿರುವುದು ಕಂಡುಬಂದಿದೆ. ತಕ್ಷಣ ಅವನು ಪೊಲೀಸರಿಗೆ ವಿಷಯ ತಿಳಿಸಿದ್ದಾನೆ.

ಪ್ರಿಯಾ ಭಾರತಿ ಸೆಹಾನ್ ಗ್ರಾಮದಲ್ಲಿ ಬಾಡಿಗೆ ಮನೆಯಲ್ಲಿ ವಾಸಿಸುತ್ತಿದ್ದರು. ಪ್ರತಿದಿನ ಆಟೋದಲ್ಲಿ ಶಾಲೆಗೆ ಹೋಗುತ್ತಿದ್ದರು. ಸೋಮವಾರ ಬೆಳಿಗ್ಗೆ ಆಟೋ ಚಾಲಕ ಎಂದಿನಂತೆ ಅವರನ್ನು ಶಾಲೆಗೆ ಕರೆದೊಯ್ಯಲು ಬಂದನು. ಆದರೆ ಬಹಳ ಸಮಯ ಕಾದರೂ ಯಾವುದೇ ಪ್ರತಿಕ್ರಿಯೆ ಬಾರದಿದ್ದಾಗ, ಅವನು ಮನೆಯ ಬಳಿ ಹೋಗಿ ಕಿಟಕಿಯಿಂದ ಒಳಗೆ ನೋಡಿದ್ದಾನೆ. ಆಗ ಪ್ರಿಯಾ ನೇಣು ಬಿಗಿದುಕೊಂಡಿರುವುದನ್ನು ನೋಡಿ ಗಾಬರಿಯಾಗಿ ಅಕ್ಕಪಕ್ಕದವರಿಗೆ ವಿಷಯ ತಿಳಿಸಿದನು. ಬಳಿಕ ಪೊಲೀಸರಿಗೆ ಮಾಹಿತಿ ನೀಡಲಾಯಿತು.

ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಆಗಮಿಸಿ, ಶವವನ್ನು ವಶಕ್ಕೆ ತೆಗೆದುಕೊಂಡು ಮರಣೋತ್ತರ ಪರೀಕ್ಷೆಗೆ ಕಳುಹಿಸಿದರು. ರೂಂನಲ್ಲಿ ಒಂದು ಸೂಸೈಡ್ ನೋಟ್ ಕೂಡ ಪತ್ತೆಯಾಗಿದ್ದು, ಅದರಲ್ಲಿ "ಅಮ್ಮ ಮತ್ತು ಅಪ್ಪ, ಕ್ಷಮಿಸಿ. ನನಗೆ ಯಾರೊಂದಿಗೂ ಯಾವುದೇ ಜಗಳವಿಲ್ಲ. ನಾನು ನನ್ನ ಸ್ವಂತ ಇಚ್ಛೆಯಿಂದ ಈ ಲೋಕವನ್ನು ತೊರೆಯುತ್ತಿದ್ದೇನೆ. ನನ್ನ ಶವವನ್ನು ರಸೂಲ್‌ಪುರಕ್ಕೆ ಕೊಂಡೊಯ್ಯಬಾರದು. ನನ್ನ ಅಂತ್ಯಕ್ರಿಯೆಗಳನ್ನು ಹಾಜಿಪುರದಲ್ಲಿ ನಡೆಸಬೇಕು. ಯಾವುದೇ ಕಾರಣಕ್ಕೂ ನನ್ನ ಗಂಡ ನನ್ನ ಅಂತ್ಯಕ್ರಿಯೆ ಮಾಡಬಾರದು. ನನ್ನ 3 ತಿಂಗಳ ಹೆಣ್ಣು ಮಗುವೇ ಅಂತ್ಯಕ್ರಿಯೆ ಮಾಡಬೇಕು. ನನ್ನ ಮೊಬೈಲ್ ಫೋನ್ ನನ್ನ ಗಂಡನಿಗೆ ಹಸ್ತಾಂತರಿಸಬೇಕು. ನನ್ನ ಮೊಬೈಲ್‌ನಲ್ಲಿ ಸಂದೇಶಗಳು, ಆಡಿಯೋ ಮತ್ತು ವಿಡಿಯೋ ಸಂದೇಶಗಳಿವೆ. ಅದರ ಪಾಸ್‌ವರ್ಡ್‌ಗಳು ನನ್ನ ಗಂಡನಿಗೆ ತಿಳಿದಿವೆ. ನಾನು ನೋಯಿಸಿದ ಪ್ರತಿಯೊಬ್ಬರಲ್ಲೂ ನಾನು ಕ್ಷಮೆ ಯಾಚಿಸುತ್ತೇನೆ. ಮರಣೋತ್ತರ ಪರೀಕ್ಷೆ ನಡೆಸದಂತೆ ನಾನು ಪೊಲೀಸ್ ಆಡಳಿತವನ್ನು ವಿನಂತಿಸುತ್ತೇನೆ. ನನ್ನ ಪತಿ ಅಥವಾ ಕುಟುಂಬದ ವಿರುದ್ಧ ಯಾವುದೇ ಪ್ರಕರಣ ದಾಖಲಿಸಬಾರದು. ಅಮ್ಮ , ಅಪ್ಪ ನಿಮ್ಮ ಮಗಳು ಸೋತಿದ್ದಾಳೆ. ಕ್ಷಮಿಸಿ ಅಮ್ಮ." ಎಂದು ಬರೆಯಲಾಗಿದೆ.

ನನ್ನ ಸಾವಿಗೆ ಯಾರೂ ಕಾರಣರಲ್ಲ. 5.5 ಲೀಟರ್ ಹಾಲಿಗೆ ನಾನು ಹಣ ನೀಡಬೇಕಾಗಿದೆ. ಆ ಹಣ ನನ್ನ ಪರ್ಸ್‌ನಲ್ಲಿದೆ. ಅದನ್ನು ಅವರಿಗೆ ಕೊಟ್ಟುಬಿಡಿ ಎಂದು ಆ ಮಹಿಳೆ ಸೂಸೈಡ್ ನೋಟ್‌ನಲ್ಲಿ ಬರೆದಿದ್ದಾರೆ.

ಪ್ರಿಯಾ ಭಾರತಿ ಎರಡು ವರ್ಷಗಳ ಹಿಂದೆ ಜಂದಹಾ ಪೊಲೀಸ್ ಠಾಣೆ ಪ್ರದೇಶದ ರಸೂಲ್‌ಪುರ ಗ್ರಾಮದ ನಿವಾಸಿ ದೀಪಕ್ ರಾಜ್ ಅವರನ್ನು ವಿವಾಹವಾಗಿದ್ದರು. ದಂಪತಿಗಳ ನಡುವೆ ಜಗಳ ನಡೆಯುತ್ತಿತ್ತು ಎನ್ನಲಾಗಿದೆ. ಪೊಲೀಸರು ಪತಿಯನ್ನು ವಿಚಾರಣೆ ನಡೆಸುತ್ತಿದ್ದು, ಎಲ್ಲಾ ಕೋನಗಳಿಂದ ಪ್ರಕರಣದ ತನಿಖೆ ನಡೆಸುತ್ತಿದ್ದಾರೆ.

# ವಿಕಲಚೇತನರಿಗೆ ಸರ್ಕಾರಿ ಯೋಜನೆ/ ಸೌಲಭ್ಯ ತಲುಪಿಸಿ: ಜಿಲ್ಲಾಧಿಕಾರಿ ಎ.ಬಿ ಬಸವರಾಜು



**ಬೆಂಗಳೂರುಗ್ರಾಮಾಂತರ :**ಸರ್ಕಾರಿ ಕಚೇರಿಗಳಲ್ಲಿ ವಿಕಲ ಚೇತನರಿಗೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಿ, ಸರ್ಕಾರದಿಂದ ಸಿಗುವ ಸೌಲಭ್ಯಗಳು ಸಮರ್ಪಕವಾಗಿ ತಲುಪಲು ಕ್ರಮ ವಹಿಸಿ ಎಂದು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಎ.ಬಿ. ಬಸವರಾಜು ಅವರು ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಭವನದ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ವಿಕಲಚೇತನ ವ್ಯಕ್ತಿಗಳ ಹಕ್ಕುಗಳ ಜಿಲ್ಲಾ ಮಟ್ಟದ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ, ಅವರು ಮಾತನಾಡಿದರು.

ಜಿಲ್ಲೆಯ ಎಲ್ಲಾ ಇಲಾಖೆಗಳ/ ಸ್ಥಳೀಯ ಸಂಸ್ಥೆಗಳ ಶೇ.5ರಷ್ಟು ಅನುದಾನ ವಿಕಲಚೇತನರ ಕಲ್ಯಾಣಕ್ಕಾಗಿ ಬಳಕೆ ಮಾಡಿದ ಬಗ್ಗೆ ಪ್ರತಿ ತಿಂಗಳು 5ನೇ ತಾರೀಖಿನೊಳಗೆ ಮಾಹಿತಿ ನೀಡಬೇಕು. ಸರ್ಕಾರಿ ಕಛೇರಿಗಳಲ್ಲಿ ವಿಕಲಚೇತನರಿಗೆ ಸುಗಮವಾಗಿ ಸಂಚರಿಸಲು ರ್‍ಯಾಂಪ್ ಗಳನ್ನು ಅಳವಡಿಸಿ, ಜಿಲ್ಲಾ ಮಟ್ಟದಲ್ಲಿ ಉದ್ಯೋಗ ಮೇಳ ಆಯೋಜಿಸಿ ವಿಕಲಚೇತನರಿಗೆ ಪ್ರತ್ಯೇಕವಾಗಿ ಅನುಕೂಲತೆ ಕಲ್ಪಿಸಲು ಅಧಿಕಾರಿಗಳಿಗೆ ಸೂಚಿಸಿದರು.

ತಿಂಗಳ ಪ್ರತಿ 3ನೇ ಸೋಮವಾರ ತಾಲ್ಲೂಕು ಮಟ್ಟದಲ್ಲಿ ತಹಸೀಲ್ದಾರ್ ರವರ ನೇತೃತ್ವದ ವಿಕಲಚೇತನರ ಕುಂದು ಕೊರತೆ ಸಭೆಯನ್ನು ನಡೆಸಿ ಸ್ಥಳೀಯ ಸಮಸ್ಯೆಗಳನ್ನು ಬಗೆಹರಿಸಲು, ಕೆಲವು ವಿಕಲಚೇತನರು ಆಧಾರ್ ಕಾರ್ಡ್ ಪಡೆಯಲು ಬಯೋಮೆಟ್ರಿಮ್ ಸಮಸ್ಯೆಯಿಂದ ಸಾಧ್ಯವಾಗುತ್ತಿಲ್ಲ ಪೋಷಣಾ ಭತ್ಯೆ ಪಡೆಯಲು ವ್ಯವಸ್ಥೆ ಕಲ್ಪಿಸುವ ಬಗ್ಗೆ ಹಾಗೂ ತೀವ್ರತರನಾದ ವಿಕಲಚೇತನರ ಮನೆ ಬಾಗಿಲಿಗೆ ಆಧಾರ ಕಾರ್ಡ್ ಸೌಲಭ್ಯವನ್ನು ಒದಗಿಸುವ ಕುರಿತು ಸಭೆಯಲ್ಲಿ ಚರ್ಚಿಸಿದರು.

ವಿಕಲಚೇತನ ಸ್ನೇಹಿ ಶೌಚಾಲಯವನ್ನು ನಿರ್ಮಿಸಬೇಕು. ಸಾರ್ವಜನಿಕ ಸಾರಿಗೆಯಲ್ಲಿ ಬಸ್ಸುಗಳುಗಳಲ್ಲಿ ಅವರಿಗೆ ಹತ್ತಲು/ ಇಳಿಯಲು ಅನುಕೂಲಕರ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶ ಶ್ರೀಶೈಲ. ಭೀಮಸೇನ. ಭಾಗಡಿ ಅವರು ಮಾತನಾಡಿ, ವಿಕಲಚೇತನರಿಗೆ ಸಂಬಂಧ ನ್ಯಾಯಾಲಯದಲ್ಲಿ ದಾವೆಗಳಿದ್ದರೆ ಶೀಘ್ರವಾಗಿ ಆದ್ಯತೆಯ ಮೇರೆಗೆ ಇತ್ಯರ್ಥ ಮಾಡಲಾಗುವುದು. ವಿಕಲಚೇತನರಿಗೆ ಉಚಿತ ಕಾನೂನು ನೆರವು ನೀಡಲಾಗುವುದು, ಜೊತೆಗೆ ವಿಕಲಚೇತನರ ವ್ಯಕ್ತಿಗಳ ಹಕ್ಕುಗಳ ರಕ್ಷಣೆ ಹಾಗೂ ಸಮಸ್ಯೆಗಳನ್ನು ಪರಿಹರಿಸಲು ಕಾನೂನು ಸೇವೆಗಳ ಪ್ರಾಧಿಕಾರ ಸದಾ ಕಾರ್ಯಪ್ರವೃತ್ತವಾಗಿದೆ ಎಂದರು.

ಸಭೆಯಲ್ಲಿ ಜಿಲ್ಲಾ ಅಂಗವಿಕಲರ ಹಾಗೂ ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಸತೀಶ್ ಪಾಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ಮುದ್ದಣ್ಣ, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರಾದ ಪ್ರೇಮ ಸೇರಿದಂತೆ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

# ಧ್ವಜಾರೋಹಣ ನೆರವೇರಿಸಿದ : ಡಾ ಸಂಗನ ಬಸಪ್ಪ ಬಿರಾದಾರ್



**ಪೀಣ್ಯ ದಾಸರಹಳ್ಳಿ:** ದೇಶದ ಸಂವಿಧಾನ ರಚಿಸಿದ ಭಾರತ ರತ್ನ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ದೇಶದ ಮಹಾನ್ ಚೇತನ ಭಾರತದ ಸಂವಿಧಾನ ವಿಶ್ವದಲ್ಲೇ ಶ್ರೇಷ್ಠ ಸಂವಿಧಾನವಾಗಿದೆ ಸಂವಿಧಾನ ಮೌಲ್ಯಗಳನ್ನು ಪ್ರತಿಯೋಬ್ಬ ಪ್ರಜೆ ಪಾಲಿಸ ಬೇಕು ಎಂದು ಡಾ. ಸಂಗನ ಬಸಪ್ಪ ಬಿರಾದಾರ್ ಹೇಳಿದರು.

ಅವರು ಹೆಗ್ಗನಹಳ್ಳಿ ಮುಖ್ಯ ರಸ್ತೆಯಲ್ಲಿರುವ ಸ್ವಾಮಿ ವಿವೇಕಾನಂದ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಡಾ.ಬಿ.ಎಂ.ಬಳ್ಳಾರಿ ಅವರ ನೇತೃತ್ವದಲ್ಲಿ ಆಯೋಜಿಸಿದ್ದ 77ನೇ ಗಣರಾಜ್ಯೋತ್ಸವದ ನಿಮಿತ್ತ ಸಂವಿಧಾನ ಶಿಲ್ಪಿ ಡಾ.ಬಿ ಆರ್ ಅಂಬೇಡ್ಕರ್ ಹಾಗೂ ರಾಷ್ಟ್ರ ಪಿತಾ ಮಹಾತ್ಮಾ ಗಾಂಧಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು ಎಲ್ಲಾ ಧರ್ಮದವರು ವಾಸಿಸುವ ನಮ್ಮ ದೇಶದಲ್ಲಿ ವಿವಿಧತೆಯಲ್ಲಿ ಏಕತೆಯಿರುವುದು ವಿಶೇಷತೆಯಾಗಿದೆ ಸಂವಿಧಾನವು ದೇಶದ ಎಲ್ಲ ನಾಗರಿಕರಿಗೂ ಸಮಾನವಾದ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯವನ್ನು ಒದಗಿಸಿದೆ ಡಾ.ಬಿ.ಆರ್. ಅಂಬೇಡ್ಕರ್ ಅವರು ಎಲ್ಲಾ ದೇಶಗಳ ಸಂವಿಧಾನಗಳನ್ನು ಅಧ್ಯಯನ ನಡೆಸಿ ಉತ್ತಮವಾದ ಸಂವಿಧಾನವನ್ನು ರಚಿಸಿದ್ದಾರೆ ನಮ್ಮ ಸಂವಿಧಾನವನ್ನು ದೇಶದ ನೂರಾ ನಲವತ್ತು ಕೋಟಿ ಜನರು ತಿಳಿದು ಕೊಳ್ಳ ಬೇಕೆಂದು ಎಂದು ಡಾ. ಸಂಗನ ಬಸಪ್ಪ ಬಿರಾದಾರ್ ಸಾರ್ವಜನಿಕರಲ್ಲಿ ಮನವರಿಕೆ ಮಾಡಿಕೊಟ್ಟರು.

ಈ ಸಂದರ್ಭದಲ್ಲಿ ಅಂಜನಪ್ಪ ಅಗ್ನಿ ಅಸ್ತ್ರ ಪತ್ರಿಕೆ ಸಂಪಾದಕರು. ಸುವರ್ಣ ರಾಜೇಶ್, ಸುರೇಶ್, ಶಾಲಾ ಮುಖ್ಯೋಪಾಧ್ಯಾಯಿನಿ ಮೇಘನಾ, ಶಿಕ್ಷಕಿ ಶಾಜಿಯಾ,ವಂದನಾ ಸೇರಿದಂತೆ ಪೋಷಕರು ವಿದ್ಯಾರ್ಥಿಗಳು ಸಮಸ್ತ ನಾಗರಿಕ ಬಂಧು ಭಗನಿಯರು ಇದ್ದರು.

# 8 ವರ್ಷದ ವಿದ್ಯಾರ್ಥಿನಿ ಹೃದಯಾಘಾತಕ್ಕೆ ಬಲಿ



**ಕೊಪ್ಪಳ:**ಸಾಮಾನ್ಯವಾಗಿ ವೃದ್ಧಾಪ್ಯದಲ್ಲಿ ಹೆಚ್ಚಾಗಿ ಕಾಣಿಸಿಕೊಳ್ಳುತ್ತಿದ್ದ ಹೃದಯಾಘಾತ ಪ್ರಕರಣಗಳು ಇತ್ತೀಚಿನ ದಿನಗಳಲ್ಲಿ ಹದಿಹರೆಯದ ಹಾಗೂ ಯುವ ವಯಸ್ಸಿನವರನ್ನೂ ಬಲಿಪಡೆಯುತ್ತಿರುವುದು ಸಮಾಜದಲ್ಲಿ ಗಂಭೀರ ಚಿಂತೆಗೆ ಕಾರಣವಾಗುತ್ತಿದೆ. ಆರೋಗ್ಯವಾಗಿದ್ದಾರೆಂದು ನಂಬಲಾಗಿದ್ದ ಯುವಜನರು ಅಚಾನಕ್ ಹೃದಯಾಘಾತಕ್ಕೆತುತ್ತಾಗಿ ಪ್ರಾಣ ಕಳೆದುಕೊಳ್ಳುತ್ತಿರುವ ಘಟನೆಗಳು ಹೆಚ್ಚಾಗುತ್ತಿದ್ದು, ಇದು ಸಾರ್ವಜನಿಕರಲ್ಲಿ ಭಯ ಹಾಗೂ ಆತಂಕವನ್ನು ಉಂಟುಮಾಡಿದೆ.

ಇಂತಹದ್ದೇ ಒಂದು ದುರ್ಘಟನೆ ಕೊಪ್ಪಳ ಜಿಲ್ಲೆಯ ಕುಕನೂರು ತಾಲೂಕಿನ ಯರ್ಾವಣಕಿ ಗ್ರಾಮದಲ್ಲಿ ನಡೆದಿದ್ದು, ಕೇವಲ 18 ವರ್ಷದ ಯುವತಿಯೊಬ್ಬಳು ಹೃದಯಾಘಾತದಿಂದ ಅಕಾಲಿಕವಾಗಿ ಸಾವನ್ನಪ್ಪಿರುವುದು ಇಡೀ ಗ್ರಾಮವನ್ನು ಶೋಕಸಾಗರದಲ್ಲಿ ಮುಳುಗಿಸಿದೆ.

**ಘಟನೆಯ ಹಿನ್ನೆಲೆ:**ಮೃತ ವಿದ್ಯಾರ್ಥಿನಿಯನ್ನು ಕಾವ್ಯಾ ಚಲವಾದಿ (18) ಎಂದು ಗುರುತಿಸಲಾಗಿದೆ. ಕಾವ್ಯಾ ಕಳೆದ ಎರಡು ದಿನಗಳಿಂದ ಸಣ್ಣಪುಟ್ಟ ಅನಾರೋಗ್ಯದಿಂದ ಬಳಲುತ್ತಿದ್ದು, ಸಾಮಾನ್ಯ ದೈಹಿಕ ಅಸ್ವಸ್ಥತೆಯೆಂದು ಕುಟುಂಬದವರು ಗಮನಿಸಿದ್ದರು ಎನ್ನಲಾಗಿದೆ. ಆದರೆ ಮಂಗಳವಾರ ಸಂಜೆ ಅಚಾನಕ್ ಅವರಿಗೆ ತೀವ್ರ ಎದೆನೋವು ಕಾಣಿಸಿಕೊಂಡು, ಕೆಲವೇ ಕ್ಷಣಗಳಲ್ಲಿ ಹೃದಯಾಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ.

ತಕ್ಷಣವೇ ಕುಟುಂಬದವರು ಹಾಗೂ ಗ್ರಾಮಸ್ಥರು ಚಿಕಿತ್ಸೆಗಾಗಿ ಪ್ರಯತ್ನಿಸಿದರೂ, ಆ ವೇಳೆಗೆ ಕಾವ್ಯಾ ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದ್ದು, ಎಲ್ಲಾ ಪ್ರಯತ್ನಗಳು ವಿಫಲವಾಗಿ ವಿದ್ಯಾರ್ಥಿನಿ ಕೊನೆಯುಸಿರೆಳೆದಿದ್ದಾರೆ. ಅತೀ ಕಿರಿಯ ವಯಸ್ಸಿನಲ್ಲಿ ಸಂಭವಿಸಿದ ಈ ದುರ್ಘಟನೆ ಕುಟುಂಬಕ್ಕೆ ಮಾತ್ರವಲ್ಲದೆ ಇಡೀ ಗ್ರಾಮಕ್ಕೆ ದೊಡ್ಡ ಆಘಾತವನ್ನುಂಟುಮಾಡಿದೆ.

ಈ ಘಟನೆ ಯುವಜನರಲ್ಲಿ ಹೆಚ್ಚುತ್ತಿರುವ ಆರೋಗ್ಯ ಸಮಸ್ಯೆಗಳು, ಜೀವನಶೈಲಿ ಬದಲಾವಣೆಗಳು ಹಾಗೂ ಅಕಾಲಿಕ ಹೃದಯಾಘಾತಗಳ ಕುರಿತು ಮತ್ತೊಮ್ಮೆ ಗಂಭೀರ ಚರ್ಚೆಗೆ ಕಾರಣವಾಗಿದ್ದು, ಆರೋಗ್ಯದ ಬಗ್ಗೆ ಹೆಚ್ಚಿನ ಜಾಗೃತಿ ಮತ್ತು ನಿಯಮಿತ ವೈದ್ಯಕೀಯ ತಪಾಸಣೆಯ ಅಗತ್ಯವಿದೆ ಎಂಬ ಸಂದೇಶವನ್ನು ಸಮಾಜಕ್ಕೆ ನೀಡುತ್ತಿದೆ.

# ತಲೆ ಕೂದಲಿಗೆ ಪಿನ್ನು, ಬಳೆ ಅಂತಾ ಮಾರುತ್ತಿದ್ದ ದಂಪತಿಯಿಂದ ಕನ್ನ





**ಬೆಂಗಳೂರು:** ನಿಮ್ಮ ಮನೆಗಳ ಬಳಿ ಬಂದು ಪಿನ್ ಕೊಡುತ್ತೇವೆ, ಬಳೆ ಮಾರಾಟ ಮಾಡುತ್ತೇವೆ, ಪಾತ್ರೆ ಮಾರಾಟ ಮಾಡುತ್ತೇವೆ ಎಂದು ಹೇಳಿಕೊಂಡು ಮಹಿಳೆಯರೊಂದಿಗೆ ಮಾತನಾಡುತ್ತಾ ನಂಬಿಕೆ ಗಳಿಸುವವರನ್ನು ನೀವು ಅನೇಕ ಬಾರಿ ನೋಡಿರಬಹುದು. ಆದರೆ ಇಂತಹವರ ಹಿಂದೆ ಕಳ್ಳತನದ ಉದ್ದೇಶವೂ ಇರಬಹುದು ಎಂಬುದಕ್ಕೆ ಕೆ.ಆರ್.ಪುರ ವ್ಯಾಪ್ತಿಯಲ್ಲಿ ನಡೆದ ಘಟನೆ ಸ್ಪಷ್ಟ ಉದಾಹರಣೆಯಾಗಿದೆ. ಇಂಥ ನೆಪದಲ್ಲಿ ಮನೆಮನೆಗೆ ಹಾಗೂ ಸಾರ್ವಜನಿಕ ಸ್ಥಳಗಳಿಗೆ ತೆರಳಿ ಕಳ್ಳತನ ಮಾಡುತ್ತಿದ್ದ ದಂಪತಿಯೊಂದು ಕೃತ್ಯ ಎಸಗುತ್ತಿದ್ದ ಸಂದರ್ಭದಲ್ಲೇ ಕೆ.ಆರ್. ಪುರದ ದೇವಸಂದ್ರ ಬಳಿ ಸಾರ್ವಜನಿಕರಿಗೆ ರೆಡ್‌ಹ್ಯಾಂಡ್ ಆಗಿ ಸಿಕ್ಕಿಬಿದ್ದಿದೆ.

ತಲೆ ಕೂದಲು, ಬೊಂಬೆ ಹಾಗೂ ಇತರ ವಸ್ತುಗಳನ್ನು ಮಾರಾಟ ಮಾಡುವ ನೆಪದಲ್ಲಿ ಮಹಿಳೆಯರ ಗಮನ ಬೇರೆಡೆ ಸೆಳೆದು, ಚಿನ್ನಾಭರಣ ಕಳ್ಳತನ ಮಾಡುತ್ತಿದ್ದ ಈ ದಂಪತಿಯಿಂದ ಪೊಲೀಸರು ಭಾರಿ ಪ್ರಮಾಣದ ಚಿನ್ನಾಭರಣವನ್ನು ವಶಪಡಿಸಿ ಕೊಂಡಿದ್ದಾರೆ. ಕೆ.ಆರ್.ಪುರ ಪೊಲೀಸರು ನಡೆಸಿದ ಕಾರ್ಯಾ ಚರಣೆಯಲ್ಲಿ ಸುಮಾರು 60 ಲಕ್ಷ ರೂ. ಮೌಲ್ಯದ 398 ಗ್ರಾಂ ಚಿನ್ನಾಭರಣ ಪತ್ತೆಯಾಗಿದ್ದು, ಬಂಧಿತ ಆರೋಪಿ ಗಳನ್ನು ಗಾಯತ್ರಿ ಮತ್ತು ಶ್ರೀಕಾಂತ್ ಎಂದು ಗುರುತಿಸಲಾಗಿದೆ.


ಪೊಲೀಸರ ತನಿಖೆಯ ಪ್ರಕಾರ, ಈ ದಂಪತಿ ಮನೆಗಳಿರುವ ಪ್ರದೇಶಗಳು, ಜಾತ್ರೆಗಳು ಹಾಗೂ ಜನಸಂದಣಿ ಇರುವ ಸಾರ್ವಜನಿಕ ಸ್ಥಳಗಳನ್ನು ಟಾರ್ಗೆಟ್ ಮಾಡಿಕೊಂಡು ತಮ್ಮ ಕೃತ್ಯಗಳನ್ನು ಎಸಗುತ್ತಿದ್ದರು. ಪತ್ನಿ ಗಾಯತ್ರಿ 'ತಲೆ ಕೂದಲಿಗೆ ಪಿನ್ ಕೊಡ್ತೀವಿ', 'ಪಾತ್ರೆ ಕೊಡ್ತೀವಿ' ಎಂದು ಹೇಳಿಕೊಂಡು ಕೂದಲು ಮತ್ತು ಬೊಂಬೆ ವ್ಯಾಪಾರ ಮಾಡುವ ನೆಪದಲ್ಲಿ ಮಹಿಳೆಯರ ಬಳಿ ಸಮೀಪಿಸುತ್ತಿದ್ದಳು. ಆ ವೇಳೆ, ಪತಿ ಶ್ರೀಕಾಂತ್ ಮಹಿಳೆಯರ ಗಮನವನ್ನು ಬೇರೆಡೆ ಸೆಳೆದು ಅವರು ಧರಿಸಿದ್ದ ಚಿನ್ನಾಭರಣಗಳನ್ನು ಕಳ್ಳತನ ಮಾಡುತ್ತಿದ್ದನು ಎಂದು ಪೊಲೀಸರು ತಿಳಿಸಿದ್ದಾರೆ.

ಈ ರೀತಿಯ ಮೋಸದ ಕಳ್ಳತನಗಳಿಂದ ಜನರು ಎಚ್ಚರವಾಗಿರಬೇಕೆಂದು ಪೊಲೀಸರು ಸಾರ್ವಜನಿಕರಿಗೆ ಎಚ್ಚರಿಕೆ ನೀಡಿದ್ದಾರೆ. ವಿಶೇಷವಾಗಿ ತಲೆ ಕೂದಲು ರೀ, ಪಿನ್ ಕೊಡ್ತೀವಿ, ಪಾತ್ರೆ ಕೊಡ್ತೀವಿ ಎಂದು ಹೇಳಿಕೊಂಡು ಯಾರಾದರೂ ನಿಮ್ಮ ಮನೆ ಅಥವಾ ಏರಿಯಾಗೆ ಬಂದರೆ ಹೆಚ್ಚಿನ ಜಾಗ್ರತೆ ವಹಿಸುವಂತೆ ಸಲಹೆ ನೀಡಿದ್ದಾರೆ. ಅನ್ಯರಿಗೆ ಮನೆ ಒಳಗೆ ಪ್ರವೇಶ ನೀಡುವಾಗಲೂ ಎಚ್ಚರಿಕೆ ಅಗತ್ಯವಿದೆ ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೆ.ಆರ್.ಪುರ ಪೊಲೀಸರು ದಂಪತಿಗಳನ್ನು ಬಂಧಿಸಿ ಮುಂದಿನ ತನಿಖೆ ಕೈಗೊಂಡಿದ್ದಾರೆ. ವಶಪಡಿಸಿಕೊಂಡ ಚಿನ್ನಾಭರಣಗಳ ಮೂಲ ಏನು, ಈ ದಂಪತಿ ಇನ್ನು ಯಾವೆಲ್ಲಾ ಕಳ್ಳತನ ಪ್ರಕರಣಗಳಲ್ಲಿ ಭಾಗಿಯಾಗಿದ್ದಾರೆ, ಬೇರೆ ಜಿಲ್ಲೆಗಳಲ್ಲಿ ಕೂಡ ಇದೇ ಮಾದರಿಯ ಅಪರಾಧಗಳನ್ನು ನಡೆಸಿದ್ದಾರೆಯೇ ಎಂಬುದರ ಕುರಿತು ವಿಚಾರಣೆ ಮುಂದುವರಿದಿದೆ. ಪೊಲೀಸರು ಶೀಘ್ರದಲ್ಲೇ ಇನ್ನಷ್ಟು ಮಾಹಿತಿಯನ್ನು ಬಹಿರಂಗಪಡಿಸುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ
9538786812\8217606793

# ಅಪ್ಪು ಯುವ ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ಎಲ್. ಮಹೇಶ್



**ಕೃಷ್ಣರಾಜಪೇಟೆ:** ಪಟ್ಟಣದ ಹೃದಯ ಭಾಗದ ಬಿಜಿಎಸ್ ಕಾಂಪ್ಲೆಕ್ಸ್ ನಲ್ಲಿ ಇರುವ ಮಾಧ್ಯಮ ಸ್ಟುಡಿಯೋ ಕಚೇರಿಗೆ ಅಪ್ಪು ಯುವ ಸಮಾಜ ಸೇವಾ ಟ್ರಸ್ಟ್‌ನ ಅಧ್ಯಕ್ಷರಾದ ಕೆ.ಎಲ್. ಮಹೇಶ್ ಅವರು ಭೇಟಿ ನೀಡಿದರು,

ಮಾಧ್ಯಮ ಸ್ಟುಡಿಯೋ ಕಚೇರಿಯ ವತಿಯಿಂದ ಅಪ್ಪು ಯುವ ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ಎಲ್. ಮಹೇಶ್ ಅವರಿಗೆ ಶಾಲು ಹೊದಿಸಿ ಸನ್ಮಾನಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಅಪ್ಪು ಯುವ ಸಮಾಜ ಸೇವಾ ಟ್ರಸ್ಟ್ ಅಧ್ಯಕ್ಷ ಕೆ.ಎಲ್. ಮಹೇಶ್ ಅವರು ಪತ್ರಿಕಾ ಮಾಧ್ಯಮಗಳು ಸಮಾಜದ ಕನ್ನಡಿಯಾಗಿದ್ದು, ಸಮಾಜಮುಖಿ ಕೆಲಸಗಳಿಗೆ ಬೆನ್ನೆಲುಬಾಗಿ ನಿಲ್ಲಬೇಕು. ಮಾಧ್ಯಮ ಸ್ಟುಡಿಯೋ ಕಛೇರಿಯ ಪತ್ರಿಕಾ ಸನ್ಮಿತ್ರರು ಒಗ್ಗಟಿನಿಂದ ಮಾಡುತ್ತಿರುವ ಕಾರ್ಯವೈಖರಿ ಮತ್ತು ಆತ್ಮೀಯತೆ ನನಗೆ ಸಂತಸ ತಂದಿದೆ ಎಂದು ಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಪತ್ರಕರ್ತ ಜಿ.ಪಿ. ರಾಜು ರವರು ಕೆ.ಎಲ್. ಮಹೇಶ್ ಅವರ ನಾಯಕತ್ವದಲ್ಲಿ ಅಪ್ಪು ಯುವ ಸಮಾಜ ಸೇವಾ ಟ್ರಸ್ಟ್ ಹಲವಾರು ಜನಪರ ಕೆಲಸಗಳನ್ನು ಹಮ್ಮಿಕೊಳ್ಳುತ್ತಿರುವುದು ಹೆಮ್ಮೆಯ ವಿಷಯ ಎಂದು ತಿಳಿಸಿದರು,

ಕಾರ್ಯಕ್ರಮದಲ್ಲಿ ಮಾಧ್ಯಮ ಸ್ಟುಡಿಯೋ ಕಛೇರಿಯ ಪತ್ರಿಕಾ ಸಮ್ಮಿತ್ರರಾದ ಜಿ.ಪಿ ರಾಜು, ಲೋಕೇಶ್. ವಿ, ಸಾಯಿಕುಮಾರ್. ಎನ್ ಕೆ, ಹಾಗೂ ಶ್ರೀನಿವಾಸ್. ಹೊಸಹೊಳಲು, ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದು ಕಾರ್ಯಕ್ರಮಕ್ಕೆ ಸಾಕ್ಷಿಯಾದರು,

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಮಹಿಳಾ ಆರ್ಥಿಕ ಸ್ವಾವಲಂಬನೆಗೆ ನೆರವು : ಶಾಸಕ ಸೋಮಶೇಖರ್




**ಯಶವಂತಪುರ :** ಮಹಿಳೆಯರು ಸ್ವಾವಲಂಬಿ ಬದುಕು ರೂಪಿಸಿಕೊಂಡುಆರ್ಥಿಕವಾಗಿ ಸದೃಢರಾಗಲು ಅಗತ್ಯವಿರುವ ಪೂರಕ ತರಬೇತಿ, ಕಾರ್ಯಾಗಾರಗಳನ್ನು ಕ್ಷೇತ್ರದಲ್ಲೆಡೆ ಆಯೋಜಿಸಲಾಗುತ್ತಿದೆ ಎಂದು ಶಾಸಕ ಎಸ್. ಟಿ ಸೋಮಶೇಖರ್ ತಿಳಿಸಿದ್ದಾರೆ.

ಕೆಂಗೇರಿ ಕೋಟೆ ವಾರ್ಡ್‌ನಬೃಂದಾವನ ಬಡಾವಣೆಯಲ್ಲಿಆಯೋಜಿಸಿದ್ದ ಹೊಲಿಗೆ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹೊಲಿಗೆ, ಗೃಹ ಬಳಕೆ ಪದಾರ್ಥಗಳ ತಯಾರಿಕೆ, ಹಾಗೂ ಇತರೆಚಟು ವಟಿಕೆಗಳಿಗೆ ಪರಿಣಿತರಿಂದ ತರಬೇತಿ ಕೊಡಿಸಲಾಗುತ್ತಿದೆ.

ಜತೆಗೆ ತರಬೇತಿ ಪಡೆದ ಮಹಿಳೆಯರು ಸ್ವಯಂ ಉದ್ಯೋಗ ಕೈಗೊಳ್ಳಲು ಸರ್ಕಾರಿ ಯೋಜನೆಗಳು ಹಾಗೂ ಸಹಾಯಧನಗಳ ಸಂಬಂಧ ಅಗತ್ಯ ಮಾರ್ಗದರ್ಶನ ಹಾಗೂ ನೆರವು ನೀಡಲಾಗುತ್ತಿದೆ.

ಮಹಿಳೆಯರು ಇದರಿಂದ ಉದ್ಯಮಿಗಳಾಗಿ ಆರ್ಥಿಕ ಸ್ವಾವಲಂಬಿಗಳಾಗುತ್ತಿದ್ದಾರೆಎಂದು ಹರ್ಷ ವ್ಯಕ್ತಪಡಿಸಿದರು

ಬೆಂಗಳೂರು ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಹಾಗೂ ಕಾಂಗ್ರೆಸ್ ಮುಖಂಡ ಆರ್. ಶಿವಮಾದಯ್ಯ ಮಾತನಾಡಿ ಮಹಿಳೆಯರು ಆರ್ಥಿಕವಾಗಿ ಸ್ವಾವಲಂಬಿಗಳಾದಾಗ ಮಾತ್ರ ಕುಟುಂಬ ಹಾಗೂ ದೇಶದ ಪ್ರಗತಿ ಸಾಧ್ಯ.ಈ ನಿಟ್ಟಿನಲ್ಲಿ ಶಾಸಕ ಎಸ್.ಟಿ ಸೋಮಶೇಖರ್ ಅವರ ಸಹಕಾರ ಹಾಗೂ ನೆರವಿನೊಂದಿಗೆ ಮಹಿಳೆಯರ ಕೌಶಲ್ಯ ಅಭಿವೃದ್ಧಿಗೆ ಪೂರಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು

ಕೆಂಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮೈಲಸಂದ್ರ, ನಾಗರಾಜ್, ಮಾಜಿ ಅಧ್ಯಕ್ಷ ಅಮೃತ್ ಗೌಡ, ಮಹಿಳಾ ಅಧ್ಯಕ್ಷೆ ಪಾರ್ವತಿ, ಕಾರ್ಯದರ್ಶಿ ಶ್ರೀನಾಥ್, ಮುಖಂಡರಾದ ಪ್ರಕಾಶ್, ರಾಮಚಂದ್ರ, ಲಕ್ಕಣ್ಣ, ಮೊದಲಾದವರಿದ್ದರು

# 6 ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ

**ನವದೆಹಲಿ:** ಆರು ವರ್ಷದ ಅಪ್ರಾಪ್ತ ಬಾಲಕಿಯ ಮೇಲೆ ಮೂವರು ಅಪ್ರಾಪ್ತ ಬಾಲಕರು ಸಾಮೂಹಿಕ ಅತ್ಯಾಚಾರವೆಸಗಿರುವ ಆಘಾತಕಾರಿ ಘಟನೆ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ ಬೆಳಕಿಗೆ ಬಂದಿದೆ. ದೆಹಲಿಯ ಭಜನ್‌ಪುರ ಪ್ರದೇಶದಲ್ಲಿ ನಡೆದ ಈ ಘಟನೆ ಸಾರ್ವಜನಿಕರಲ್ಲಿ ಭಾರೀ ಆಕ್ರೋಶ ಹಾಗೂ ಆತಂಕವನ್ನು ಉಂಟುಮಾಡಿದೆ. ಕೇವಲ 10, 13 ಮತ್ತು 14 ವರ್ಷ ವಯಸ್ಸಿನ ಮೂವರು ಅಪ್ರಾಪ್ತ ಬಾಲಕರು ಈ ಅಮಾನುಷ ಕೃತ್ಯ ಎಸಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಮಾಹಿತಿಯಂತೆ, ಈ ದುರ್ಘಟನೆ ಜನವರಿ 18ರ ಮಂಗಳವಾರ ನಡೆದಿದೆ. ಬಾಲಕಿಯನ್ನು ಮೂವರು ಆರೋಪಿಗಳು ಆಮಿಷವೊಡ್ಡಿ ಕರೆದುಕೊಂಡು ಹೋಗಿ ಅತ್ಯಾಚಾರ ಮಾಡಿದ್ದಾರೆ ಎನ್ನಲಾಗಿದೆ. ಘಟನೆಯ ಬಳಿಕ ಬಾಲಕಿಯ ಕುಟುಂಬವು ಪೊಲೀಸರಿಗೆ ದೂರು ನೀಡಿದ್ದು, ಪ್ರಕರಣ ದಾಖಲಿಸಿಕೊಂಡ ಪೊಲೀಸರು ತಕ್ಷಣ ತನಿಖೆ ಆರಂಭಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆರೋಪಿಗಳಲ್ಲಿ ಇಬ್ಬರನ್ನು ಪೊಲೀಸರು ಬಂಧಿಸಿದ್ದಾರೆ. ಬಂಧಿತ ಆರೋಪಿಗಳನ್ನು ಬಾಲ ನ್ಯಾಯ ಮಂಡಳಿಯ ಮುಂದೆ ಹಾಜರುಪಡಿಸಲಾಗಿದೆ. ಆದರೆ ಮೂರನೇ ಆರೋಪಿ ಘಟನೆಯ ನಂತರದಿಂದಲೇ ಪರಾರಿಯಾಗಿದ್ದು, ಆತನ ಕುಟುಂಬವೂ ನಾಪತ್ತೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಇದರಿಂದ ಪ್ರಕರಣದ ಗಂಭೀರತೆ ಮತ್ತಷ್ಟು ಹೆಚ್ಚಾಗಿದೆ.

ಪೊಲೀಸರ ಪ್ರಕಾರ, ಮೂರನೇ ಆರೋಪಿಯನ್ನು ಪತ್ತೆ ಹಚ್ಚಲು ವಿಶೇಷ ಶೋಧ ತಂಡವನ್ನು ರಚಿಸಲಾಗಿದ್ದು, ಘಟನಾ ಸ್ಥಳದ ಸುತ್ತಮುತ್ತಲಿನ ಸಿಸಿಟಿವಿ ಕ್ಯಾಮೆರಾ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ. ಜೊತೆಗೆ, ಸಂಬಂಧಿಕರು ಹಾಗೂ ಪರಿಚಿತರ ವಿಚಾರಣೆಯನ್ನೂ ನಡೆಸಲಾಗುತ್ತಿದೆ. ಶೀಘ್ರದಲ್ಲೇ ಪರಾರಿಯಾದ ಆರೋಪಿಯನ್ನು ಬಂಧಿಸುವ ವಿಶ್ವಾಸವಿದೆ ಎಂದು ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ. ಇತ್ತ, ಪೀಡಿತ ಬಾಲಕಿಯನ್ನು ವೈದ್ಯಕೀಯ ಪರೀಕ್ಷೆಗೆ ಒಳಪಡಿಸಲಾಗಿದ್ದು, ಅಗತ್ಯ ವೈದ್ಯಕೀಯ ಆರೈಕೆ ಹಾಗೂ ಮನೋಸಾಂತ್ವನ ಸಲಹೆ ನೀಡಲಾಗುತ್ತಿದೆ. ಬಾಲಕಿಯ ಹೇಳಿಕೆಯನ್ನು ಸೂಕ್ತ ಕಾನೂನು ಕ್ರಮದಡಿ ದಾಖಲಿಸಿಕೊಂಡಿದ್ದು, ಆಕೆಯ ಸುರಕ್ಷತೆ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ನೀಡಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# 2ನೇ ಅಖಿಲ ಭಾರತ ಪೊಲೀಸ್ ಟಿ-20 ಕ್ರಿಕೆಟ್ ಪಂದ್ಯಾವಳಿ ವಲಯ-ಬಿ ಉದ್ಘಾಟನೆ




**ಬೆಂಗಳೂರು:**2ನೇ ಅಖಿಲ ಭಾರತ ಪೊಲೀಸ್ ಟಿ-20 ಕ್ರಿಕೆಟ್ ಪಂದ್ಯಾವಳಿ - ವಲಯ ಬಿ ಯ ಉದ್ಘಾಟನಾ ಸಮಾರಂಭವು ಜನವರಿ 28, 2026 ರಂದು ಬೆಂಗಳೂರಿನ ಆಲೂರಿನ KSCA ಕ್ರಿಕೆಟ್ ಮೈದಾನದಲ್ಲಿ 1100 ಗಂಟೆಗೆ ಅದ್ದೂರಿ ಮತ್ತು ಉತ್ಸಾಹದಿಂದ ನಡೆಯಿತು. ಪಂದ್ಯಾವಳಿಯನ್ನು ದಕ್ಷಿಣ ವಲಯದ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕ (ADG) ಶ್ರೀ ರವಿದೀಪ್ ಸಿಂಗ್ ಸಾಹಿ ಅವರು ಔಪಚಾರಿಕವಾಗಿ ಉದ್ಘಾಟಿಸಿದರು, ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದರು. ಈ ಸಮಾರಂಭವನ್ನು CRPF ನ ಕೇರಳ ಮತ್ತು ಕರ್ನಾಟಕ ವಲಯದ ಪೊಲೀಸ್ ಮಹಾನಿರ್ದೇಶಕ ಡಾ. ವಿಪುಲ್ ಕುಮಾರ್, ಐಪಿಎಸ್ ಅವರ ಉಪಸ್ಥಿತಿಯಲ್ಲಿ ನಡೆಸಲಾಯಿತು, ಅವರ ನಾಯಕತ್ವ ಮತ್ತು ಮಾರ್ಗದರ್ಶನವು ಪಡೆಯೊಳಗೆ ಕ್ರೀಡೆ ಮತ್ತು ಕಲ್ಯಾಣ ಚಟುವಟಿಕೆಗಳನ್ನು ಉತ್ತೇಜಿಸುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಸಮಾರಂಭದಲ್ಲಿ ಗೌರವಾನ್ವಿತ ಅತಿಥಿಯಾಗಿ ಭಾಗವಹಿಸಿದ್ದ ಕೆಎಸ್‌ಸಿಎ ಕಾರ್ಯದರ್ಶಿ ಶ್ರೀ ಸಂತೋಷ್ ಮೆನನ್ ಅವರ ಉಪಸ್ಥಿತಿಯಿಂದ ಈ ಕಾರ್ಯಕ್ರಮವು ಮತ್ತಷ್ಟು ಗೌರವಕ್ಕೆ ಪಾತ್ರವಾಯಿತು.

ಮುಖ್ಯ ಅತಿಥಿಗಳಾದ ಹೆಚ್ಚುವರಿ ಪೊಲೀಸ್ ಮಹಾ ನಿರ್ದೇಶಕ (ಎಡಿಜಿ) ಶ್ರೀ ರವಿದೀಪ್ ಸಿಂಗ್ ಸಾಹಿ ಅವರು ತಮ್ಮ ಭಾಷಣದಲ್ಲಿ ದೈಹಿಕ ಸದೃಢತೆಯನ್ನು ಉತ್ತೇಜಿಸುವಲ್ಲಿ, ಶಿಸ್ತನ್ನು ಬೆಳೆಸುವಲ್ಲಿ, ತಂಡದ ಕೆಲಸವನ್ನು ಬಲಪಡಿಸುವಲ್ಲಿ ಮತ್ತು ಪೊಲೀಸ್ ಪಡೆಗಳಲ್ಲಿ ಕೌಶಲ್ಯವನ್ನು ಹೆಚ್ಚಿಸುವಲ್ಲಿ ಕ್ರೀಡೆಯ ಪ್ರಮುಖ ಪಾತ್ರವನ್ನು ಒತ್ತಿ ಹೇಳಿದರು. ಈ ಪಂದ್ಯಾವಳಿಯನ್ನು ಅಖಿಲ ಭಾರತ ಪೊಲೀಸ್ ಕ್ರೀಡಾ ನಿಯಂತ್ರಣ ಮಂಡಳಿ (ಎಐಪಿಎಸ್‌ಸಿಬಿ) ಆಶ್ರಯದಲ್ಲಿ ಆಯೋಜಿಸಲಾಗುತ್ತಿದೆ ಮತ್ತು ಇದನ್ನು ಸಿಆರ್‌ಪಿಎಫ್, ಕರ್ನಾಟಕ ಮತ್ತು ಕೇರಳ ವಲಯ, ಗ್ರೂಪ್ ಸೆಂಟರ್ ಸಿಆರ್‌ಪಿಎಫ್, ಯಲಹಂಕ ಆಯೋಜಿಸಿದೆ. ಉದ್ಘಾಟನಾ ಸಮಾರಂಭದಲ್ಲಿ ಸಿಆರ್‌ಪಿಎಫ್ ಮತ್ತು ಇತರ ಕೇಂದ್ರ ಮತ್ತು ರಾಜ್ಯ ಪೊಲೀಸ್ ಪಡೆಗಳ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ಭಾಗವಹಿಸಿದ್ದರು, ಇದು ಏಕತೆ ಮತ್ತು ಕ್ರೀಡಾ ಮನೋಭಾವವನ್ನು ಪ್ರತಿಬಿಂಬಿಸುತ್ತದೆ.

ಉದ್ಘಾಟನಾ ಸಮಾರಂಭವನ್ನು ದೇಶಾದ್ಯಂತ ತಲುಪಲು ಅಧಿಕೃತ ಸಿಆರ್‌ಪಿಎಫ್ ಯೂಟ್ಯೂಬ್ ಚಾನೆಲ್‌ನಲ್ಲಿ ನೇರ ಪ್ರಸಾರ ಮಾಡಲಾಯಿತು. 2ನೇ ಅಖಿಲ ಭಾರತ ಪೊಲೀಸ್ ಟಿ-20 ಕ್ರಿಕೆಟ್ ಟೂರ್ನಮೆಂಟ್ - ವಲಯ ಬಿ ಜನವರಿ 28, 2026 ರಿಂದ ಫೆಬ್ರವರಿ 01, 2026 ರವರೆಗೆ ಆಲೂರಿನ ಕೆಎಸ್ಸಿಎ ಕ್ರಿಕೆಟ್ ಮೈದಾನದಲ್ಲಿ ನಡೆಯಲಿದ್ದು, ಕೇಂದ್ರ ಮತ್ತು ರಾಜ್ಯ ಪೊಲೀಸ್ ಪಡೆಗಳ ಹತ್ತು ತಂಡಗಳು ಭಾಗವಹಿಸಲಿವೆ,ನಂತರ ಕರ್ನಾಟಕ ಮತ್ತು ಕೇರಳದ ರೋಮಾಂಚಕ ಪರಂಪರೆಯನ್ನು ಪ್ರತಿಬಿಂಬಿಸುವ ಸಾಂಸ್ಕೃತಿಕ ಪ್ರದರ್ಶನಗಳು ನಡೆದವು.

ಉದ್ಘಾಟನಾ ಸಮಾರಂಭದ ಯಶಸ್ವಿ ಆಯೋಜನೆಯು ಪಂದ್ಯಾವಳಿಗೆ ಒಂದು ರೋಮಾಂಚಕ ಆರಂಭವನ್ನು ಸೂಚಿಸಿತು ಮತ್ತು ಕ್ರೀಡಾ ಮನೋಭಾವ, ಏಕತೆ, ಶಿಸ್ತು ಮತ್ತು ಸೌಹಾರ್ದತೆಯ ಮೌಲ್ಯಗಳನ್ನು ಪುನರುಚ್ಚರಿಸಿತು.




# ಧಮ್ಕಿ ಪುಢಾರಿ ರಾಜೀವ್ ಗೌಡಗೆ ಜೈಲು



**ಚಿಕ್ಕಬಳ್ಳಾಪುರ:** ಶಿಡ್ಲಘಟ್ಟ ನಗರಸಭೆಯ ಪೌರಾಯುಕ್ತೆ ಅಮೃತಗೌಡ ಅವರಿಗೆ ಧಮ್ಕಿ ಹಾಕಿದ ಆರೋಪಕ್ಕೆ ಸಂಬಂಧಿಸಿದಂತೆ ರಾಜಕೀಯ ಪುಢಾರಿ ರಾಜೀವ್ ಗೌಡ ಜೈಲು ಸೇರಿದ್ದಾನೆ. ಈ ಪ್ರಕರಣವು ಜಿಲ್ಲೆಯಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿದ್ದು, ಸಾರ್ವಜನಿಕ ವಲಯದಲ್ಲಿ ತೀವ್ರ ಪ್ರತಿಕ್ರಿಯೆ ವ್ಯಕ್ತವಾಗಿದೆ.

ಪೊಲೀಸರ ಮಾಹಿತಿಯಂತೆ, ರಾಜೀವ್ ಗೌಡನನ್ನು ಕೇರಳದಲ್ಲಿ ಸೋಮವಾರ ಬಂಧಿಸಲಾಗಿತ್ತು. ಬಂಧನದ ನಂತರ ಆತನನ್ನು ಕಡ್ಡಾಯ ವೈದ್ಯಕೀಯ ಪರೀಕ್ಷೆಗೆ ಒಳಪಡಿಸಿ, ಇಂದು ಪೊಲೀಸ್ ಭದ್ರತೆಯೊಂದಿಗೆ ಜೆಎಂಎಫ್‌ಸಿ (JMFC) ನ್ಯಾಯಾಲಯದ ಮುಂದೆ ಹಾಜರು ಪಡಿಸಲಾಯಿತು. ನ್ಯಾಯಾಲಯ ದಲ್ಲಿ ರಾಜೀವ್ ಗೌಡ ಪರ ವಕೀಲ ವಿವೇಕ್ ರೆಡ್ಡಿ ವಾದ ಮಂಡಿಸಿ ಜಾಮೀನು ಕೋರಿ ಅರ್ಜಿ ಸಲ್ಲಿಸಿದರು.

ಆದರೆ ಪೊಲೀಸರ ಪರ ವಾದ ಮಂಡಿಸಿದ ವಕೀಲ ಮೊಹಮ್ಮದ್ ಖ್ವಾಜಾ, ಪ್ರಕರಣದ ತನಿಖೆ ಇನ್ನೂ ಪೂರ್ಣಗೊಂಡಿಲ್ಲ ಎಂದು ಕೋರ್ಟ್‌ಗೆ ತಿಳಿಸಿದರು. ಆರೋಪಿಯ ಮೊಬೈಲ್ ಫೋನ್ ಅನ್ನು ವಶಕ್ಕೆ ಪಡೆದು ಪರಿಶೀಲಿಸಬೇಕಿದೆ, ಪರಾರಿಯಾಗಲು ಬಳಸಿದ್ದ ಕಾರನ್ನು ಸೀಜ್ ಮಾಡಬೇಕಿದೆ ಮತ್ತು ಇನ್ನೂ ಹಲವು ಅಂಶಗಳ ಕುರಿತು ವಿಚಾರಣೆ ನಡೆಸಬೇಕಿದೆ ಎಂದು ಅವರು ವಾದಿಸಿದರು. ಈ ಹಂತದಲ್ಲಿ ಆರೋಪಿಗೆ ಜಾಮೀನು ನೀಡಿದರೆ ತನಿಖೆಗೆ ಅಡ್ಡಿಯಾಗುವ ಸಾಧ್ಯತೆ ಇದೆ ಎಂದು ತಿಳಿಸಿ, ಯಾವುದೇ ಕಾರಣಕ್ಕೂ ಜಾಮೀನು ಮಂಜೂರು ಮಾಡಬಾರದು ಎಂದು ಕೋರ್ಟ್‌ಗೆ ಮನವಿ ಮಾಡಿದರು.

ಎರಡೂ ಪಕ್ಷಗಳ ವಾದಗಳನ್ನು ಆಲಿಸಿದ ನ್ಯಾಯಾಲಯ, ರಾಜೀವ್ ಗೌಡ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ವಜಾಗೊಳಿಸಿ, ಆತನನ್ನು 14 ದಿನಗಳ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಂತೆ ಆದೇಶ ಹೊರಡಿಸಿತು. ಇದರೊಂದಿಗೆ ರಾಜೀವ್ ಗೌಡ ಜೈಲು ಪಾಲಾಗಿದ್ದಾನೆ.

ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜೀವ್ ಗೌಡಗೆ ಆಶ್ರಯ ನೀಡಿದ್ದ ಆರೋಪ ಎದುರಿಸುತ್ತಿದ್ದ ಮಂಗಳೂರು ಮೂಲದ ಉದ್ಯಮಿ ಮೈಕಲ್‌ಗೆ ಮಾತ್ರ ನ್ಯಾಯಾಲಯ ಜಾಮೀನು ಮಂಜೂರು ಮಾಡಿದೆ. ಈ ಬೆಳವಣಿಗೆ ಪ್ರಕರಣಕ್ಕೆ ಹೊಸ ತಿರುವು ನೀಡಿದೆ.

ಇತ್ತ, ಬಂಧನ ಮತ್ತು ನ್ಯಾಯಾಲಯದ ಆದೇಶದ ನಡುವೆಯೇ ರಾಜೀವ್ ಗೌಡ ನಾನು ಯಾವುದೇ ತಪ್ಪು ಮಾಡಿಲ್ಲ. ನನ್ನ ವಿರುದ್ಧ ಸುಳ್ಳು ಆರೋಪಗಳನ್ನು ಮಾಡಲಾಗಿದೆ ಎಂದು ಹೇಳಿಕೊಂಡಿದ್ದಾನೆ. ಈ ಪ್ರಕರಣದ ತನಿಖೆ ಮುಂದುವರಿದಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಮಾಹಿತಿ ಹೊರಬೀಳುವ ಸಾಧ್ಯತೆ ಇದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಕುಷ್ಠರೋಗ ಮುಕ್ತ ಸಮಾಜ ನಿರ್ಮಾಣ ಗುರಿ:ಡಿಸಿ ಎಬಿ ಬಸವರಾಜು




ಕುಷ್ಠರೋಗದ ಬಗ್ಗೆ ಸಾರ್ವಜನಿಕರಿಗೆ ಹೆಚ್ಚಿನ ಜಾಗೃತಿ ಮೂಡಿಸುವ ಮೂಲಕ ಕುಷ್ಠರೋಗ ಮುಕ್ತ ಸಮಾಜ ನಿರ್ಮಾಣಕ್ಕೆ ನಾವೆಲ್ಲರೂ ಅಣಿಯಾಗಬೇಕು ಎಂದು ಜಿಲ್ಲಾಧಿಕಾರಿ ಎಬಿ ಬಸವರಾಜು ಹೇಳಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ಹಮ್ಮಿಕೊಂಡಿರುವ ಸ್ಪರ್ಶ್ ಕುಷ್ಠ ರೋಗ ಅರಿವು ಆಂದೋಲನ ಕಾರ್ಯಕ್ರಮದ ಪೋಸ್ಟರ್ ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ 'ತಾರತಮ್ಯವನ್ನು ಕೊನೆಗೊಳಿಸುವುದು, ಘನತೆಯನ್ನು ಕಾಪಾಡುವುದು' ಎಂಬ ಘೋಷಣೆಯೊಂದಿಗೆ ಈ ವರ್ಷ ಜಿಲ್ಲೆಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಜನವರಿ 30 ರಿಂದ ಫೆಬ್ರವರಿ 13 ವರೆಗೆ ಹಮ್ಮಿಕೊಳ್ಳಲಾಗಿದೆ.

ಕುಷ್ಟರೋಗವು ಸಾಂಕ್ರಾಮಿಕ ರೋಗವಾಗಿದ್ದು ಸಾರ್ವಜನಿಕರು ಇದಕ್ಕೆ ಭಯಪಡುವ ಅಗತ್ಯವಿಲ್ಲ ಈ ಜಾಗೃತಿ ಅಭಿಯಾನದ ಸಂದರ್ಭದಲ್ಲಿ ಶಾಲಾ ಮಕ್ಕಳ ತಪಾಸಣೆ, ಉಪ ಕೇಂದ್ರ ಮೂಲಕ ಗ್ರಾಮದಲ್ಲಿ ಜಾಗೃತಿ ಜಾತ ಆಯೋಜಿಸುವುದಲ್ಲದೆ ಕುಷ್ಟರೋಗ ನಿರ್ಮೂಲನೆ ಕುರಿತು ಎಲ್ಲರಿಗೂ ಪ್ರತಿಜ್ಞಾವಿಧಿ ಭೋದಿಸಲಾಗುವುದು ಎಂದರು.

ಬಾಧಿತ ರೋಗಿಗಳಿಗೆ ಸರ್ಕಾರದಿಂದ ಸಿಗುತ್ತಿರುವ ಸೌಲಭ್ಯಗಳು ಸಮರ್ಪಕವಾಗಿ ತಲುಪುತ್ತಿದೆಯೇ? ಅಥವಾ ಸೌಲಭ್ಯ ವಂಚಿತರು ಇನ್ನು ಇದ್ದಾರಾ! ಇದ್ದರೆ ಯಾಕೆ ಅವರಿಗೆ ಇನ್ನೂ ಸರ್ಕಾರಿ ಸೌಲಭ್ಯ ಸಿಕ್ಕಿಲ್ಲ, ಯಾವ ಇಲಾಖೆಯಲ್ಲಿ ಅವರಿಗೆ ಯಾವ ಸೌಲಭ್ಯ ಇದೆ ಎಂಬುದರ ಬಗ್ಗೆ ಕುಲಂಕುಂಶವಾಗಿ ಮಾಹಿತಿ ನೀಡಿ ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಡಿಸಿ ಸೂಚಿಸಿದರು.

ಆರೋಗ್ಯ ಇಲಾಖೆಯು ಇತರೆ ಸಂಬಂಧಪಟ್ಟ ಇಲಾಖೆಗಳ ಸಹಯೋಗದೊಂದಿಗೆ ಜಿಲ್ಲೆಯ ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರಿಗೆ, ಶಾಲಾ ಕಾಲೇಜು ಶಿಕ್ಷಕರಿಗೆ, ಶಾಲಾ ಕಾಲೇಜು, ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ, ಸಾರ್ವಜನಿಕರಿಗೆ ಕುಷ್ಠರೋಗದ ಬಗ್ಗೆ ಅರಿವು ಮೂಡಿಸಿ, ಕುಷ್ಠರೋಗ ಮುಕ್ತ ಸಮಾಜ ನಿರ್ಮಾಣಕ್ಕೆ ಎಲ್ಲಾ ಇಲಾಖೆಗಳ ಪಾತ್ರ ಮುಖ್ಯವಾದದ್ದು ಎಂದರು.

**ಕುಷ್ಠರೋಗದ ಲಕ್ಷಣಗಳು:**ಕುಷ್ಠ ರೋಗವು ಮೈಕೊಬ್ಯಾಕ್ಟಿರಿಯಂ ಲೆಪ್ರೆ ಎಂಬ ರೋಗಾಣುವಿನಿಂದ ಉಂಟಾಗುವ ಸಾಂಕ್ರಾಮಿಕ ರೋಗವಾಗಿದೆ. ಪಾದಗಳು ಬೆರಳುಗಳ ದೌರ್ಬಲ್ಯ, ಕಣ್ಣುಮುಚ್ಚುವಲ್ಲಿ ತೊಂದರೆ ವ್ಯಕ್ತಿಯ ದೇಹದ ಮೇಲೆ ಸ್ಪರ್ಶಜ್ಞಾನವಿಲ್ಲದ ಮಚ್ಚೆಗಳು ನೋವಿನಿಂದ ಕೂಡಿದ ಊದಿಕೊಂಡ ನರಗಳು, ವ್ಯಕ್ತಿಯ ದೇಹದ ಯಾವುದೇ ಭಾಗದಲ್ಲಿ ತಿಳಿ ಬಿಳಿ ಅಥವಾ ತಾಮ್ರವರ್ಣದ ಸ್ಪರ್ಶ ಜ್ಞಾನವಿಲ್ಲದ ಮಚ್ಚೆಗಳು. ಇಂತಹ ಲಕ್ಷಣಗಳು ಕಂಡುಬಂದಲ್ಲಿ ಸಮೀಪದ ಸರ್ಕಾರಿ ಆರೋಗ್ಯ ಕೇಂದ್ರ ಪರೀಕ್ಷಿಸಿಕೊಳ್ಳಬೇಕು.

ಜಿಲ್ಲೆಯಲ್ಲಿ ಪ್ರಸ್ತುತ 20 ಕುಷ್ಠರೋಗ ಪ್ರಕರಣಗಳು ಚಿಕಿತ್ಸೆಯಲ್ಲಿದ್ದು, 16 ಕುಷ್ಠರೋಗ ಪ್ರಕರಣಗಳು ಚಿಕಿತ್ಸೆಯಿಂದ ಗುಣವಾಗಿದೆ ಎಂದು ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ. ನಾಗರಾಜು ಅವರು ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯಾಧಿಕಾರಿ ಡಾ.ಲಕ್ಕಾ ಕೃಷ್ಣಾರೆಡ್ಡಿ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಬೈಲಾಂಜಿನಪ್ಪ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಮುದ್ದಣ್ಣ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ತಾಲ್ಲೂಕಿನ ಹಿರಿಯ ಆರೋಗ್ಯ ನಿರೀಕ್ಷಣ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಪರಪ್ಪನ ಅಗ್ರಹಾರ ಜೈಲಲ್ಲಿ ದಿಢೀರ್ ದಾಳಿ

**ಬೆಂಗಳೂರು:** ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲಿ ದಿಢೀರ್ ದಾಳಿ ನಡೆಸಲಾಗಿದ್ದು, ಕೈದಿಗಳ ಬ್ಯಾರಕ್‌ನಿಂದ ಭಾರಿ ಪ್ರಮಾಣದ ನಿಷೇಧಿತ ವಸ್ತುಗಳು ಪತ್ತೆಯಾಗಿವೆ. ಜೈಲಿನ ಟವರ್-1ರ 6ನೇ ಬ್ಯಾರಕ್‌ನ 4ನೇ ಕೊಠಡಿಯಲ್ಲಿ ನಡೆದ ಈ ಕಾರ್ಯಾ ಚರಣೆಯಲ್ಲಿ 8 ಮೊಬೈಲ್ ಫೋನ್‌ಗಳು, 1 ಸಿಮ್ ಕಾರ್ಡ್, 2 ಚಾರ್ಜರ್ ಹಾಗೂ 3 ಇಯರ್ ಫೋನ್‌ಗಳನ್ನು ಅಧಿಕಾರಿಗಳು ವಶಪಡಿಸಿ ಕೊಂಡಿದ್ದಾರೆ.

ಕಾರಾಗೃಹ ಡಿಜಿಪಿಯಾಗಿ ಅಲೋಕ್ ಕುಮಾರ್ ಅವರು ನೇಮಕಗೊಂಡ ಬಳಿಕ ಜೈಲಿನಲ್ಲಿ ನಡೆಯುತ್ತಿದ್ದ ಅಕ್ರಮ ಚಟುವಟಿಕೆಗಳಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಲಾಗಿದೆ. ಈ ಹಿನ್ನೆಲೆ, ಕಳೆದ ಎರಡು ತಿಂಗಳಿನಿಂದ ನಿರಂತರವಾಗಿ ಜೈಲು ಅಧಿಕಾರಿಗಳು ಬ್ಯಾರಕ್‌ಗಳ ಮೇಲೆ ದಾಳಿ ನಡೆಸುತ್ತಿದ್ದು, ಇದುವರೆಗೆ 200ಕ್ಕೂ ಹೆಚ್ಚು ಮೊಬೈಲ್ ಫೋನ್‌ಗಳನ್ನು ವಶಕ್ಕೆ ಪಡೆಯಲಾಗಿದೆ.

ಪರಪ್ಪನ ಅಗ್ರಹಾರ ಜೈಲು ಭದ್ರತೆ ಕುರಿತಂತೆ ಗಂಭೀರ ಸೂಚನೆ ನೀಡಿದ್ದ ಡಿಜಿಪಿ ಅಲೋಕ್ ಕುಮಾರ್ ಅವರು, ಅಕ್ರಮ ಚಟುವಟಿಕೆಗಳಿಗೆ ತಕ್ಷಣವೇ ಬ್ರೇಕ್ ಹಾಕುವಂತೆ ಜೈಲು ಸಿಬ್ಬಂದಿಗೆ ಖಡಕ್ ಎಚ್ಚರಿಕೆ ನೀಡಿದ್ದರು. ಯಾವುದೇ ರೀತಿಯ ಅಕ್ರಮ ಮುಂದುವರಿದರೆ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂಬುದಾಗಿ ಕೂಡಾ ಅವರು ಸ್ಪಷ್ಟಪಡಿಸಿದ್ದರು. ಈ ಎಚ್ಚರಿಕೆಯ ನಂತರ ಎಚ್ಚೆತ್ತುಕೊಂಡ ಜೈಲು ಅಧಿಕಾರಿಗಳು, ಬ್ಯಾರಕ್‌ಗಳ ಮೇಲೆ ಏಕಾಏಕಿ ದಾಳಿ ನಡೆಸಿ ಪರಿಶೀಲನೆ ಆರಂಭಿಸಿದ್ದಾರೆ.

ಕೈದಿಗಳು ಅಡಗಿಸಿಟ್ಟಿದ್ದ ಮೊಬೈಲ್, ಸಿಮ್ ಕಾರ್ಡ್ ಹಾಗೂ ಇತರ ಎಲೆಕ್ಟ್ರಾನಿಕ್ ಉಪಕರಣಗಳನ್ನು ವಶಪಡಿಸಿಕೊಳ್ಳಲಾಗಿದೆ. ಜೈಲಿನೊಳಗೆ ಮೊಬೈಲ್ ಬಳಕೆ ಸಂಪೂರ್ಣ ನಿಷೇಧವಾಗಿದ್ದರೂ, ಅಕ್ರಮವಾಗಿ ಈ ಸಾಧನಗಳು ಹೇಗೆ ಒಳಗೆ ತಲುಪುತ್ತಿವೆ ಎಂಬುದು ಗಂಭೀರ ಪ್ರಶ್ನೆ ಉದ್ಭವಿಸಿದೆ.

ಇನ್ನು ಅಕ್ರಮ ಹಣ ವ್ಯವಹಾರಕ್ಕೂ ಜೈಲಿನಲ್ಲಿ ಬ್ರೇಕ್ ಹಾಕಲಾಗುತ್ತಿದೆ. ಜನವರಿ 23ರಂದು ಕೈದಿಯೊಬ್ಬನನ್ನು ಭೇಟಿಯಾಗಲು ಬಂದ ಮಹಿಳೆಯೊಬ್ಬರು, ಅಕ್ರಮವಾಗಿ ಹಣ ನೀಡಲು ಯತ್ನಿಸಿದ ಘಟನೆ ಬೆಳಕಿಗೆ ಬಂದಿದೆ. ಅನುಷಾ ಎಂಬ ಮಹಿಳೆ, ಕೈದಿ ಸೋಮಶೇಖರ್ ಎಂಬಾತನನ್ನು ಭೇಟಿಯಾಗಲು ಜೈಲಿಗೆ ಬಂದಿದ್ದರು. ಸಂದರ್ಶನದ ವೇಳೆ ಗಾಜಿನ ಕೆಳಭಾಗದಲ್ಲಿದ್ದ ಸಣ್ಣ ರಂಧ್ರದ ಮೂಲಕ ಹಣ ನೀಡಲು ಮುಂದಾಗುತ್ತಿದ್ದಂತೆ, ಎಚ್ಚರಿಕೆಯಿಂದಿದ್ದ ಜೈಲು ಸಿಬ್ಬಂದಿ ಅವರನ್ನು ತಕ್ಷಣವೇ ವಶಕ್ಕೆ ಪಡೆದಿದ್ದಾರೆ.

ಈ ವೇಳೆ ಅವರ ಬಳಿ ಇದ್ದ 22,000 ರೂಪಾಯಿ ನಗದನ್ನು ಜಪ್ತಿ ಮಾಡಲಾಗಿದ್ದು, ಈ ಸಂಬಂಧ ಪರಪ್ಪನ ಅಗ್ರಹಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಡಿಜಿಪಿ ಅಲೋಕ್ ಕುಮಾರ್ ಅವರ ಕಟ್ಟುನಿಟ್ಟಿನ ನಿರ್ದೇಶನದ ಹಿನ್ನೆಲೆಯಲ್ಲಿ ಜೈಲಿನ ಎಲ್ಲಾ ಟವರ್ ಹಾಗೂ ಬ್ಯಾರಕ್‌ಗಳಲ್ಲಿ ತಪಾಸಣೆ ನಡೆಸಲಾಗುತ್ತಿದೆ.

# ರಾಜ್ಯದಲ್ಲಿ ಮತ್ತೊಂದು ಭೀಕರ ಬಸ್ ದುರಂತ: ಅದೃಷ್ಟವಶಾತ್ 36 ಪ್ರಯಾಣಿಕರ ಪಾರು

**ಶಿವಮೊಗ್ಗ:** ಜಿಲ್ಲೆಯ ಹೊಸನಗರ ತಾಲೂಕಿನ ರಿಪ್ಪನ್‌ಪೇಟೆ ಸಮೀಪದ ಅರಸಾಳು-ಸೂಡೂರು ಪ್ರದೇಶದಲ್ಲಿ ಇಂದು ಬೆಳ್ಳಂಬೆಳಗ್ಗೆ ಭೀಕರ ಅಗ್ನಿ ಅವಘಡವೊಂದು ಸಂಭವಿಸಿದ್ದು, ಭಾರಿ ಅನಾಹುತವೊಂದು ತಪ್ಪಿದಂತಾಗಿದೆ. ನಿಟ್ಟೂರಿನಿಂದ ರಾಜ್ಯ ರಾಜಧಾನಿ ಬೆಂಗಳೂರಿಗೆ ತೆರಳುತ್ತಿದ್ದ ಖಾಸಗಿ ಸ್ಲೀಪರ್ ಕೋಚ್ ಬಸ್ ಏಕಾಏಕಿ ಬೆಂಕಿಗಾಹುತಿಯಾಗಿದ್ದು, ಬಸ್‌ನಲ್ಲಿದ್ದ 36 ಮಂದಿ ಪ್ರಯಾಣಿಕರು ಕೂದಲೆಳೆ ಅಂತರದಲ್ಲಿ ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ಘಟನೆ ಸ್ಥಳೀಯರಲ್ಲಿ ಆತಂಕ ಮತ್ತು ಭೀತಿಯನ್ನು ಉಂಟುಮಾಡಿದೆ.

**ಘಟನೆಯ ವಿವರ:**ನಿಟ್ಟೂರಿನಿಂದ ಬೆಂಗಳೂರಿಗೆ ಪ್ರಯಾಣ ಆರಂಭಿಸಿದ್ದ 'ಅನ್ನ ಪೂರ್ಣೇಶ್ವರಿ' ಎಂಬ ಖಾಸಗಿ ಸ್ಲೀಪರ್ ಕೋಚ್ ಬಸ್, ಅರಸಾಳು-ಸೂಡೂರು ಬಳಿ ಚಲಿಸುತ್ತಿದ್ದ ವೇಳೆ ಅಚಾನಕ್ ಇಂಜಿನ್ ಭಾಗದಲ್ಲಿ ಬೆಂಕಿ ಕಾಣಿಸಿಕೊಂಡಿದೆ. ಆರಂಭದಲ್ಲಿ ಸಣ್ಣ ಮಟ್ಟದಲ್ಲಿ ಕಾಣಿಸಿಕೊಂಡ ಬೆಂಕಿ, ಕ್ಷಣಾರ್ಧದಲ್ಲೇ ಉಗ್ರ ರೂಪ ಪಡೆದು ಇಡೀ ಬಸ್‌ಗೆ ವ್ಯಾಪಿಸಲು ಶುರುವಾಗಿದೆ. ಆ ವೇಳೆಗೆ ಬಹುತೇಕ ಪ್ರಯಾಣಿಕರು ಗಾಢ ನಿದ್ರೆಯಲ್ಲಿದ್ದರು ಎನ್ನಲಾಗಿದೆ.

**ಚಾಲಕನ ಸಮಯಪ್ರಜ್ಞೆ:**ಇಂಜಿನ್ ಭಾಗದಿಂದ ಹೊಗೆ ಮತ್ತು ಬೆಂಕಿ ಕಾಣಿಸಿಕೊಂಡ ತಕ್ಷಣ ಎಚ್ಚೆತ್ತುಕೊಂಡ ಚಾಲಕ, ಸಮಯಪ್ರಜ್ಞೆ ಪ್ರದರ್ಶಿಸಿ ಬಸ್ ಅನ್ನು ತಕ್ಷಣವೇ ರಸ್ತೆ ಬದಿಗೆ ನಿಲ್ಲಿಸಿದ್ದಾನೆ. ಕೂಡಲೇ ಚಾಲಕ ಹಾಗೂ ನಿರ್ವಾಹಕರು ಬಸ್‌ನ ಮುಖ್ಯ ದ್ವಾರ ಮತ್ತು ತುರ್ತು ನಿರ್ಗಮನ ದ್ವಾರಗಳನ್ನು (Emergency Exit) ತೆರೆಯುವ ಜೊತೆಗೆ, ಜೋರಾಗಿ ಕೂಗಿ ಪ್ರಯಾಣಿಕರನ್ನು ಎಚ್ಚರಿಸಿದ್ದಾರೆ. ಅವರ ಚುರುಕಿನ ಕ್ರಮದಿಂದ ಎಚ್ಚೆತ್ತ ಪ್ರಯಾಣಿಕರು ಆತಂಕದ ನಡುವೆ ಬಸ್‌ನಿಂದ ಸುರಕ್ಷಿತವಾಗಿ ಹೊರಬಂದಿದ್ದಾರೆ.

**ಲಗೇಜ್ ಸಂಪೂರ್ಣ ನಾಶ:**ಆದರೆ ಬೆಂಕಿ ಅತ್ಯಂತ ವೇಗವಾಗಿ ಹರಡಿದ ಕಾರಣ, ಹೆಚ್ಚಿನ ಪ್ರಯಾಣಿಕರಿಗೆ ತಮ್ಮ ಲಗೇಜ್ ಮತ್ತು ವೈಯಕ್ತಿಕ ವಸ್ತುಗಳನ್ನು ಹೊರತೆಗೆಯಲು ಸಾಧ್ಯವಾಗಲಿಲ್ಲ. ಬಸ್‌ನ ಡಿಕ್ಕಿಯಲ್ಲಿ ಇರಿಸಿದ್ದ ಬಟ್ಟೆ, ಬೆಲೆಬಾಳುವ ವಸ್ತುಗಳು, ದಾಖಲೆಗಳು ಸೇರಿದಂತೆ ಬಹುತೇಕ ಸಾಮಾನುಗಳು ಬೆಂಕಿಯಲ್ಲಿ ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿವೆ. ಕೆಲವೇ ನಿಮಿಷಗಳಲ್ಲಿ ಬಸ್ ಸಂಪೂರ್ಣವಾಗಿ ಬೆಂಕಿಗಾಹುತಿಯಾಗಿ ಅವಶೇಷ



ವಾಗಿ ಮಾರ್ಪಟ್ಟಿದೆ.

**ಗಾಯಾಳುಗಳಿಗೆ ಚಿಕಿತ್ಸೆ**ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಅಗ್ನಿಶಾಮಕ ಸಿಬ್ಬಂದಿ ಹಾಗೂ ಸ್ಥಳೀಯರು ಸ್ಥಳಕ್ಕೆ ಧಾವಿಸಿ ಬೆಂಕಿ ನಂದಿಸಲು ಪ್ರಯತ್ನಿಸಿದರು. ಆದರೆ ಆಗಾಗಲೇ ಬೆಂಕಿಯ ತೀವ್ರತೆ ಹೆಚ್ಚಾಗಿದ್ದರಿಂದ ಬಸ್ ಅನ್ನು ಉಳಿಸಲು ಸಾಧ್ಯವಾಗಲಿಲ್ಲ. ಈ ದುರಂತದಲ್ಲಿ ಬಸ್ ಚಾಲಕ ಸೇರಿದಂತೆ ಒಟ್ಟು ನಾಲ್ಕು ರಿಂದ ಐದು ಮಂದಿಗೆ ಸಣ್ಣಪುಟ್ಟ ಗಾಯಗಳಾಗಿದ್ದು, ಅವರನ್ನು ತಕ್ಷಣವೇ ಸಮೀಪದ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ನೀಡಲಾಗಿದೆ. ಎಲ್ಲರೂ ಅಪಾಯದಿಂದ ಹೊರಗಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ.

**ಪೊಲೀಸ್ ಪರಿಶೀಲನೆ**ಸ್ಥಳಕ್ಕೆ ರಿಪ್ಪನ್‌ಪೇಟೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಾಥಮಿಕ ತನಿಖೆಯಲ್ಲಿ ಶಾರ್ಟ್ ಸರ್ಕ್ಯೂಟ್ ಕಾರಣದಿಂದ ಈ ಅಗ್ನಿ ಅವಘಡ ಸಂಭವಿಸಿರಬಹುದೆಂದು ಶಂಕಿಸಲಾಗಿದೆ. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ನಿಖರ ಕಾರಣ ಪತ್ತೆ ಹಚ್ಚಲು ಹೆಚ್ಚಿನ ತನಿಖೆ ಮುಂದುವರಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.